3 ನೇ ಅಧಿಕ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದಲ್ಲಿ , ತುಮಕೂರು

**Spl.C. No.387/2021**

ಪ್ರಾಸಾ 13

ಚಾಸಾ 21

| | |
|---|---|
| ಹೆಸರು | ಮಂಗಳಮ್ಮ |
| ತಂದೆಯ ಹೆಸರು | ಬಾಬಣ್ಣ |
| ವಯಸ್ಸು | 55 ವರ್ಷ |
| ಉದ್ಯೋಗ | P.S.I., N.E.P.S. ಪೋಲೀಸ್ ಠಾಣೆ , ತುಮಕೂರು |
| ವಾಸಸ್ಥಳ | ತುಮಕೂರು |

ಸಾಕ್ಷಿಯನ್ನು ದಿನಾಂಕ 10.08.2026 ರಂದು ಕರೆಸಿ ಪ್ರಮಾಣೀಕರಿಸಲಾಯ್ತು.

**ಮುಖ್ಯ ವಿಚಾರಣೆಃ ಮಾನ್ಯ ಸರ್ಕಾರಿ ಅಭಿಯೋಜಕರವರಿಂದಃ**

1) ನಾನು ದಿನಾಂಕ 10.07.2021 ರಿಂದ 20.09.2022 ರವರೆಗೆ ನಾನು ತುಮಕೂರಿನ ಮಹಿಳಾ ಪೋಲೀಸ್ ಠಾಣೆಯಲ್ಲಿ ಪಿಎಸ್ಐ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

2) ದಿನಾಂಕ 17.08.2021 ರಂದು ರಾತ್ರಿ 8.00 ಗಂಟೆಗೆ ನಾನು ಠಾಣೆಯಲ್ಲಿದ್ದಾಗ ಚಾಸಾ.1 ರವರು ಠಾಣೆಗೆ ಹಾಜರಾಗಿ ನಿಪಿ.1 ರಂತೆ ದೂರನ್ನು ಸಲ್ಲಿಸಿರುತ್ತಾರೆ. ನಿಪಿ.1 ರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ.1(ಬಿ) ಎಂದು ಗುರುತಿಸಲಾಯಿತು. ನಂತರ ಪ್ರಕರಣವನ್ನು ದಾಖಲು ಮಾಡಿಕೊಂಡು ಪ್ರ.ವ.ವರದಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ. ಪ್ರ.ವ.ವರದಿಯನ್ನು ನಿಪಿ.34 ಎಂದು, ಸಾಕ್ಷಿಯ ಸಹಿಯನ್ನು

ನಿಪಿ.34(ಎ) ಎಂದು ಗುರುತಿಸಲಾಯಿತು. ನಂತರ ಕಡತವನ್ನು ಮುಂದಿನ ತನಿಖೆಗಾಗಿ ಚಾಸಾ.22 ರವರಿಗೆ ಹಸ್ತಾಂತರಿಸಿರುತ್ತೇನೆ.

**<u>ಪಾಟೀಸವಾಲುಃ ಆರೋಪಿ ಪರ ಶ್ರೀ.ಬಿ.ಎಸ್.ಡಿ. ವಕೀಲರಿಂದ :</u>**

3) ದೂರನ್ನು ಮೊದಲೇ ಬರೆದುಕೊಂಡು ಬಂದಿದ್ದರು. ದೂರನ್ನು ನೀಡಲು ಎಂಟು ತಿಂಗಳು ತಡವಾಗಿರುವ ಬಗ್ಗೆ ಚಾಸಾ.1 ರವರು ವಿವರಣೆಯನ್ನು ನೀಡಿರುವುದಿಲ್ಲ. ನಾನೇ ಠಾಣೆಯಲ್ಲಿ ಚಾಸಾ.1 ರವರಿಂದ ದೂರನ್ನು ಬರೆಸಿಕೊಂಡಿರುತ್ತೇನೆ ಎಂದರೆ ಸರಿಯಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇ ಎ ಒ

3 ನೇ ಅಧಿಕ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ತುಮಕೂರು.

ಸಾಕ್ಷಿಯ ಸಹಿ